ವಿ-330-54

# ಕರ್ನಾಟಕ ವಿಧಾನ ಪರಿಷತ್ತು

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಂ.ನಾರಾಯಣ ಸ್ವಾಮಿ ಇವರು **"ಬೆಂಗಳೂರು ಹಾಗೂ ಸುತ್ತಮುತ್ತಲಿರುವ ವಿವಿಧ ವಿಧಾನಸಭಾ ಕ್ಷೇತ್ರಗಳಲ್ಲಿನ ಬೃಹತ್ ಮಹಾನಗರ ಪಾಲಿಕೆ ಮತ್ತು ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಬರುವ ವಿವಿಧ ಪ್ರದೇಶಗಳಲ್ಲಿ ಅನಧಿಕೃತವಾಗಿ ಸರ್ಕಾರಿ ಜಾಗದ ಒತ್ತುವರಿಯಾಗಿದ್ದು, ಈ ಒತ್ತುವರಿಗಳ ಬಗ್ಗೆ ಸಾರ್ವಜನಿಕರಿಂದ ಅನೇಕ ದೂರುಗಳು ಬಂದಿದ್ದರೂ ಸಹಾ ಈ ಒತ್ತುವರಿಯನ್ನು ಸರ್ಕಾರದ ವಶಕ್ಕೆ ಪಡೆಯದೇ ಇರುವುದರ ಕಾರಣದಿಂದ ಸರ್ಕಾರಕ್ಕೆ ಸಾವಿರಾರು ಕೋಟಿ ರೂಗಳ ನಷ್ಟ ಉಂಟಾಗಿದ್ದು, ಈ ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಹಾಗೂ ಅಧಿಕಾರಿಗಳ ಅಸಹಕಾರದಿಂದ ವಿಫಲವಾಗಿದೆ. ವಿಫಲರಾದ ಅಧಿಕಾರಿಗಳ ವಿರುದ್ಧ ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ಕಲಂ 192(ಎ) ಮತ್ತು (ಬಿ) ಅಡಿಯಲ್ಲಿ ಕ್ರಿಮಿನಲ್ ಮೊಕದ್ದಮೆ ಹೂಡಿ, ಒತ್ತುವರಿಯನ್ನು ತೆರವುಗೊಳಿಸುವ ಕುರಿತು"** ನಿಯಮ 330ರಡಿ ನೀಡಿರುವ ಸೂಚನೆಗೆ ಮಾನ್ಯ ಕಂದಾಯ ಸಚಿವರ ಹೇಳಿಕೆ:

* * * *

ಉಲ್ಲೇಖ: ನಿಯಮ 330 ರ ಸೂಚನೆ ದಿನಾಂಕ: 03-03-2020

ಸರ್ಕಾರಿ ಜಮೀನುಗಳ ಸಂರಕ್ಷಣೆ ಹಾಗೂ ಅವುಗಳ ಉತ್ತಮ ನಿರ್ವಹಣೆಯ ಧ್ಯೇಯೋದ್ದೇಶದೊಂದಿಗೆ ಕಾರ್ಯ ನಿರ್ವಹಿಸಲು **ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮವನ್ನು** ಸ್ಥಾಪಿಸಲಾಗಿದ್ದು, ರಾಜ್ಯಾದಂತ ಒತ್ತವರಿಯನ್ನು ತೆರವುಗೊಳಿಸುವ ಪ್ರಕ್ರಿಯೆಯನ್ನು ತೀವ್ರಗೊಳಿಸಲಾಗಿದೆ. ಅಲ್ಲದೇ ಸರ್ಕಾರಿ ಜಮೀನುಗಳ ಒತ್ತುವರಿ ಪ್ರಕರಣಗಳನ್ನು ಸಮರ್ಥವಾಗಿ ತಡೆಯುವ ಉದ್ದೇಶದಿಂದ ಸರ್ಕಾರವು ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯವನ್ನು ಸ್ಥಾಪಿಸಲಾಗಿದೆ.

ಬೆಂಗಳೂರು ನಗರ ಜಿಲ್ಲೆಯಲ್ಲಿನ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿರುವ ಕುರಿತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 192(ಎ) ಮತ್ತು 192(ಬಿ) ರಡಿ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ಈ ಕೆಳಕಂಡಂತೆ ತಾಲ್ಲೂಕುವಾರು ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ.

| ಕ್ರ.ಸಂ | ತಾಲ್ಲೂಕು | ಪ್ರಕರಣಗಳ ಸಂಖ್ಯೆ |
|---|---|---|
| 1 | ಬೆಂಗಳೂರು ಉತ್ತರ | 79 |
| 2 | ಬೆಂಗಳೂರು ದಕ್ಷಿಣ | 94 |
| 3 | ಬೆಂಗಳೂರು ಪೂರ್ವ | 119 |
| 4 | ಯಲಹಂಕ | 61 |
| 5 | ಆನೇಕಲ್ | 119 |
| 6 | ಒಟ್ಟು | 472 |

ಸರ್ಕಾರಿ ಜಮೀನಿನಲ್ಲಿ ಅನಧಿಕೃತ ಸಾಗುವಳಿ ಮಾಡುತ್ತಿರುವ ಒಟ್ಟು 3300 ಪ್ರಕರಣಗಳು ಬಾಕಿ ಇದ್ದು ಈ ಬಗ್ಗೆ ವಿಶೇಷ ಜಿಲ್ಲಾಧಿಕಾರಿಗಳು-1 ಬೆಂಗಳೂರು ಉತ್ತರ ಉಪವಿಭಾಗ ಮತ್ತು ವಿಶೇಷ ಜಿಲ್ಲಾಧಿಕಾರಿಗಳು-2 ಬೆಂಗಳೂರು ದಕ್ಷಿಣ ಉಪವಿಭಾಗ ರವರ ನ್ಯಾಯಾಲಯಗಳಲ್ಲಿ ಕರ್ನಾಟಕ ಭೂ ಕಂದಾಯ ಕಾಯಿದೆ 1964 ಕಲಂ 136(3) ರಡಿ ಪ್ರಕರಣಗಳು ದಾಖಲಾಗಿದ್ದು, ಪ್ರಕರಣಗಳು ವಿಚಾರಣಾ ಹಂತದಲ್ಲಿರುತ್ತದೆ ಮತ್ತು ದಾಖಲೆಗಳ ನೈಜತೆಯನ್ನು ಪರಿಶೀಲಿಸಿ ಕ್ರಮವಹಿಸಬೇಕಾಗಿರುತ್ತದೆ.

.....2

ಮುಂದುವರೆದು, ಸರ್ಕಾರಿ ಜಮೀನು ಒತ್ತುವರಿಯಾಗಿರುವ ಬಗ್ಗೆ ಸಾರ್ವಜನಿಕರಿಂದ ಸ್ವೀಕೃತವಾಗುವ ನಿರ್ದಿಷ್ಟ ದೂರುಗಳನ್ನು ಸಹ ಸಂಬಂಧಪಟ್ಟ ಅಧಿಕಾರಿಗಳಿಗೆ ಕಳುಹಿಸಿ, ಅಗತ್ಯ ಕಾನೂನು ಕ್ರಮಗಳನ್ನು ಜರುಗಿಸಲು ಸೂಚಿಸಲಾಗುತ್ತಿದೆ. ಒತ್ತುವರಿದಾರರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುತ್ತಿದೆ ಹಾಗೂ ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸುವುದು, ಒತ್ತುವರಿದಾರರ ವಿರುದ್ಧ ಕ್ರಮ ಜರುಗಿಸುವುದು, ಒತ್ತುವರಿ ತೆರವುಗೊಳಿಸಲು ವಿಫಲವಾಗಿರುವ ಅಧಿಕಾರಿಗಳು, ಹಾಗೂ ಭೂ ಕಬಳಿಕೆಗೆ ದುಷ್ಪ್ರೇರಣೆ ನೀಡುವ/ ನಕಲಿ ದಾಖಲೆಗಳನ್ನು ಸೃಷ್ಟಿಸಲು ಶಾಮಿಲಾದ ಅಧಿಕಾರಿ/ ಸಿಬ್ಬಂದಿಗಳ ವಿರುದ್ಧ ಕಾನೂನು/ ಶಿಸ್ತು ಕ್ರಮಗಳನ್ನು ಜರುಗಿಸುವ ಕುರಿತು ಎಲ್ಲಾ ಜಿಲ್ಲಾಧಿಕಾರಿಗಳಿಗೂ ದಿನಾಂಕ 20-1-2020 ರಲ್ಲಿ ಸುತ್ತೋಲೆ ಮೂಲಕ ಕಟ್ಟುನಿಟ್ಟಿನ ಸೂಚನೆಗಳನ್ನು ತಪ್ಪದೇ ಪಾಲಿಸತಕ್ಕದ್ದೆಂದು ತಿಳಿಸಲಾಗಿರುತ್ತದೆ.

ಮುಂದುವರೆದು, ಸರ್ಕಾರಿ ಜಮೀನುಗಳ ಒತ್ತುವರಿ ತೆರವುಗೊಳಿಸಲು ಹಾಗೂ ಸಂರಕ್ಷಿಸಲು "ಸರ್ಕಾರಿ ಜಮೀನುಗಳ ಸಂರಕ್ಷಣಾ ಸಮಿತಿ"ಯನ್ನು ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 15 ಎಲ್‌ಜಿಪಿ 2020, ದಿನಾಂಕ:29/01/2020ರ ಮೂಲಕ ರಚಿಸಲಾಗಿದ್ದು, ಸಮಿತಿಗೆ ಅಗತ್ಯ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.

**ಆರ್‌ಡಿ 72 ಎಲ್‌ಜಿಕ್ಯೂ 2020**

(ಆರ್.ಅಶೋಕ)
ಕಂದಾಯ ಸಚಿವರು